ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2027
ಸದಸ್ಯರ ಹೆಸರು	:	ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು	:	ಕಂದಾಯ ಸಚಿವರು
ಉತ್ತರಿಸುವ ದಿನಾಂಕ	:	24.03.2021

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಹನೂರು ತಾಲ್ಲೂಕಿನಲ್ಲಿ ತಾಲ್ಲೂಕು ಆಡಳಿತವನ್ನು ಸುಗಮಗೊಳಿಸಲು ತಾಲ್ಲೂಕು ಮಟ್ಟದ ಎಲ್ಲಾ ಕಚೇರಿಗಳೂ ಒಂದೆಡೆ ಇರುವಂತೆ, ಮಿನಿ ವಿಧಾನಸೌಧ ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ;	ಹೌದು
ಆ)	ಈ ಪ್ರಸ್ತಾವನೆಗೆ ಸರ್ಕಾರದ ಅನುಮೋದನೆ ದೊರಕಿದೆಯೇ; ಮಿನಿ ವಿಧಾನಸೌಧ ನಿರ್ಮಾಣದ ಅಂದಾಜು ವೆಚ್ಚ ಎಷ್ಟು; ಯಾವ ಕಾಲಮಿತಿಯಲ್ಲಿ ಈ ಮಿನಿ ವಿಧಾನಸೌಧ ನಿರ್ಮಾಣ ಕಾಮಗಾರಿಯನ್ನು ಆರಂಭಿಸಲಾಗುವುದು;	ಹನೂರು ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಹನೂರು ಹೋಬಳಿ, ಹುಲ್ಲೇಪುರ ಗ್ರಾಮದ ಸ.ನಂ.312/ಡಿ ರಲ್ಲಿ ವಿಸ್ತೀರ್ಣ 7.76 ಎಕರೆ ಮತ್ತು 312/ಇ ರಲ್ಲಿ 1.17 ಎಕರೆ ವಿಸ್ತೀರ್ಣ ಒಟ್ಟು 8.93 ಎಕರೆ ಜಮೀನನ್ನು ಗುರುತಿಸಲಾಗಿದ್ದು, ಸದರಿ ಜಮೀನಿನಲ್ಲಿ ಕಟ್ಟಡ ಕಾಮಗಾರಿಯನ್ನು ರೂ.10.00 ಕೋಟಿಗಳ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗೆ ಪ್ರಸ್ತಾವನೆ ಸ್ವೀಕೃತವಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಪರಿಶೀಲನೆಯಲ್ಲಿದೆ.
ಇ)	ಚಾಮರಾಜನಗರ ಜಿಲ್ಲೆಯಲ್ಲಿ ಒಂದೇ ರೆವಿನ್ಯೂ ಉಪವಿಭಾಗವಿದ್ದು, ಸಾರ್ವಜನಿಕ ಆಡಳಿತದ ಹಿತದೃಷ್ಟಿಯಿಂದ ಚಾಮರಾಜನಗರದಲ್ಲಿ ಇನ್ನೊಂದು ಉಪವಿಭಾಗವನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?	ಚಾಮರಾಜನಗರ ಜಿಲ್ಲೆಯಲ್ಲಿ ಮತ್ತೊಂದು ಉಪ ವಿಭಾಗ ಕಛೇರಿ ತೆರೆಯುವ ಬಗ್ಗೆ ಜಿಲ್ಲಾಧಿಕಾರಿ ಚಾಮರಾಜನಗರ ಇವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು ಪರಿಶೀಲನೆಯಲ್ಲಿದೆ.

ಕಂಇ 47 ಡಬ್ಲ್ಯೂಬಿಆರ್ 2021

(ಆರ್. ಅಶೋಕ)
ಕಂದಾಯ ಸಚಿವರು